ಕಾವಲ್‌ಭೈರಸಂದ್ರ ಲೋಕೋಪಯೋಗಿ ಇಲಾಖೆಯ ವಸತಿ ಗೃಹಗಳಲ್ಲಿ ಕುಡಿಯುವ ನೀರಿನ ಅಸಮರ್ಪಕ ಪೂರೈಕೆ

1696 (2186) ಶ್ರೀ ಕೆ.ಎಚ್.ಹನುಮೇಗೌಡ (ಹಾಸನ)

ಶ್ರೀ ಸಿ.ಎಂ.ಲಿಂಗಪ್ಪ (ರಾಮನಗರ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದ ಕಾವಲ್‌ಭೈರಸಂದ್ರದ ಲೋಕೋಪಯೋಗಿ ಇಲಾಖೆಯ ವಸತಿ ಗೃಹಗಳಲ್ಲಿ ನೀರಿನ ಪೂರೈಕೆ ಅಸಮರ್ಪಕವಾಗಿರುವುದರಿಂದ, ಅಲ್ಲಿನ ನಿವಾಸಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಹಲವಾರು ಬಾರಿ ದೂರು ನೀಡಿದ್ದರೂ, ನೀರಿನ ಪೂರೈಕೆ ಸರಿಪಡಿಸದಿರಲು ಕಾರಣವೇನು;

ಇ) ಇಲ್ಲಿನ ನೀರಿನ ವ್ಯವಸ್ಥೆಯನ್ನು ಯಾವಾಗ ಸರಿಪಡಿಸಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು)

ಅ) ಸರಕಾರದ ಗಮನಕ್ಕೆ ಬಂದಿದೆ.

ಆ) ಬೆಂಗಳೂರು ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿಯು ಸಮರ್ಪಕ ನೀರು ಪೂರೈಕೆಗೆ ಕ್ರಮ ಕೈಗೊಳ್ಳುತ್ತದೆ.

ಇ) ಮೇಲಿನಂತೆ.

ರಾಜ್ಯದಲ್ಲಿನ ಖಾಸಗಿ ಅನುದಾನಿತ ಐ.ಟಿ.ಐ ಕಾಲೇಜುಗಳು

1697 (2192) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಕರ್ನಾಟಕ ರಾಜ್ಯದಲ್ಲಿ ಎಷ್ಟು ಖಾಸಗೀ ಅನುದಾನಿತ ಐ.ಟಿ.ಐ. ಕಾಲೇಜುಗಳಿವೆ;

ಆ) ಈ ಕಾಲೇಜುಗಳ ಶಿಕ್ಷಕರಿಗೆ ವೇತನ ಅನುದಾನವನ್ನು ನೀಡಲಾಗುತ್ತಿದೆಯೆ; ನೀಡಲಾಗುತ್ತಿದ್ದರೆ ಶೇಕಡ ಎಷ್ಟನ್ನು ನೀಡಲಾಗುತ್ತಿದೆ;

ಇ) ಈ ಕಾಲೇಜುಗಳಲ್ಲಿರುವ ಶಿಕ್ಷಕರಿಗೆ ಸರ್ಕಾರಿ ಶಿಕ್ಷಕರಿಗೆ ನೀಡುತ್ತಿರುವ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತಿದೆಯೆ? (ವಿವರ ನೀಡುವುದು)

ಶ್ರೀ ಎ.ಎಂ.ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು).

ಅ) 112

ಆ) ಹೌದು

ಶೇಕಡ 75ರಷ್ಟು.

ಇ) ಇಲ್ಲ